**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮಧು ಜಿ. ಮಾದೇಗೌಡ, ಇವರ ನಿಯಮ 72ರಡಿಯಲ್ಲಿ ನೀಡಿರುವ ಸೂಚನೆಗೆ ಹೇಳಿಕೆ**

**ಸೂಚನೆ**

ಸರ್ಕಾರವು ಕರ್ನಾಟಕ ಲೋಕಸೇವಾ ಆಯೋಗ(ಕೆ.ಪಿ.ಎಸ್.ಸಿ)ದ ಮೂಲಕ ಗೆಜೆಟೆಡ್ ಪ್ರೊಬೇಷನರಿ ಗ್ರೂಪ್ 'ಎ' ಮತ್ತು 'ಬಿ' ವೃಂದದ 43 ಹುದ್ದೆಗಳನ್ನು ಭರ್ತಿ ಮಾಡಲು ಶೀಘ್ರದಲ್ಲೇ ಅಧಿಸೂಚನೆ ಹೊರಡಿಸಲು ಸಿದ್ಧತೆ ನಡೆಸಿರುವುದು ತಿಳಿದುಬಂದಿದೆ. ರಾಜ್ಯದಲ್ಲಿ ಗೆಜೆಟೆಡ್ ಪ್ರೊಬೇಷನರಿ ಗ್ರೂಪ್ 'ಎ' ಮತ್ತು 'ಬಿ' ವೃಂದದ ಸುಮಾರು 350ಕ್ಕೂ ಹೆಚ್ಚು ಹುದ್ದೆಗಳು ಖಾಲಿ ಇದ್ದರೂ ಕೇವಲ 43 ಹುದ್ದೆಗಳನ್ನು ಮಾತ್ರ ಭರ್ತಿ ಮಾಡಲು ಅವಕಾಶ ನೀಡಿರುವುದರಿಂದ ಕೆ.ಎ.ಎಸ್. ಅಧಿಕಾರಿ ಆಗಬೇಕೆಂದು ಪರೀಕ್ಷೆಗೆ ಪೂರ್ವಸಿದ್ಧತೆ ನಡೆಸಿರುವ ಅಭ್ಯರ್ಥಿಗಳಿಗೆ ತೀವ್ರ ನಿರಾಸೆಯನ್ನು ಉಂಟುಮಾಡಿದೆ. ಕಳೆದ ಐದು ವರ್ಷಗಳ ಬಳಿಕ ಅತೀ ಕಡಿಮೆ ಹುದ್ದೆಗಳ ಭರ್ತಿಗೆ ಮುಂದಾಗಿರುವುದು ಉದ್ಯೋಗಾಂಕ್ಷಿಗಳ ಪಾಲಿಗೆ ಅನ್ಯಾಯವಾಗಲಿದೆ. ಕಳೆದ ಮೂರು ವರ್ಷಗಳಿಂದ ಕೊರೊನಾ ಸಾಂಕ್ರಾಮಿಕ ರೋಗದಿಂದ ನೂರಾರು ಕೆ.ಎ.ಎಸ್. ಅಭ್ಯರ್ಥಿಗಳು 2017-18ನೇ ಸಾಲಿನ ಕೆ.ಎ.ಎಸ್. ಪರೀಕ್ಷೆ ಬರೆಯಲು ಸಾಧ್ಯವಾಗಿರುವುದಿಲ್ಲ. ಕಾಲಕಾಲಕ್ಕೆ ಗೆಜೆಟೆಡ್ ಪ್ರೊಬೇಷನರಿ ಗ್ರೂಪ್ 'ಎ' ಮತ್ತು 'ಬಿ' ವೃಂದದ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳದೇ ಇರುವುದರಿಂದ ಉದ್ಯೋಗಾಂಕ್ಷಿಗಳ ವಯೋಮಿತಿಯು ಏರುತ್ತಿದೆ. ಆದ್ದರಿಂದ, ಹುದ್ದೆಗಳ ಸಂಖ್ಯೆಗಳನ್ನು ಏರಿಕೆ ಮಾಡುವುದರ ಜೊತೆಗೆ 2020ರ ಕೊರೊನಾ ಸಂದರ್ಭದಲ್ಲಿ ನಡೆದ ಪೂರ್ವಭಾವಿ ಪರೀಕ್ಷೆಗೆ ಅರ್ಜಿ ಸಲ್ಲಿಸಿ ಪ್ರಸ್ತುತ ವಯೋಮಿತಿ ಮೀರಿರುವ ಎಲ್ಲಾ ಅಭ್ಯರ್ಥಿಗಳಿಗೂ ಅರ್ಜಿ ಸಲ್ಲಿಸಲು ಅವಕಾಶ ಮಾಡಿಕೊಡಬೇಕಿದೆ.

****

**ಹೇಳಿಕೆ**

ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕ) ನಿಯಮಗಳು, 1997ರನ್ವಯ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ನೇಮಕಾತಿಗಾಗಿ ಸಂಬಂಧಪಟ್ಟ ಆಡಳಿತ ಇಲಾಖೆಗಳು ರಿಕ್ತ ಸ್ಥಾನಗಳಿಗೆ, ಆರ್ಥಿಕ ಇಲಾಖೆಯ ಅನುಮೋದನೆ ಪಡೆದು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತವೆ. ಅದರಂತೆ ಖಾಲಿ ಇರುವ ಒಟ್ಟು 43 ಗ್ರೂಪ್-ಎ ಮತ್ತು ಗ್ರೂಪ್-ಬಿ ಹುದ್ದೆಗಳಿಗೆ ಆಯ್ಕೆ ಮಾಡಲು ನೇಮಕಾತಿ ಪ್ರಕ್ರಿಯೆ ನಡೆಸುವಂತೆ ದಿನಾಂಕ: 04.11.2022ರಂದು ಆಯ್ಕೆ ಪ್ರಾಧಿಕಾರವಾದ ಕರ್ನಾಟಕ ಲೋಕಸೇವಾ ಆಯೋಗವನ್ನು ಕೋರಲಾಗಿತ್ತು.

ಮುಂದುವರೆದು, ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳು (ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) ಅಧ್ಯಾದೇಶ, 2022ರ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 29 ಶಾಸನ 2022, ದಿನಾಂಕ: 23.10.2022ರನ್ವಯ ಹುದ್ದೆಗಳ ವರ್ಗೀಕರಣವನ್ನು ಪರಿಷ್ಕರಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

ಸಂಖ್ಯೆ: ಸಿಆಸುಇ 197 ಎಸ್‌ಎಸ್‌ಸಿ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ



Generated from eOffice by G JAGADEESHA, CMO-JS(GJ), JOINT SECREATRY, CMO on 21/12/2022 01:15 PM